ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in

ಸ್ವಾತಂತ್ರ್ಯದ ಅಮೃತ ಮಹೋತ್ಸವ

ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009

**ಸಂಖ್ಯೆ: ಕವಿಪ್ರನಿನಿ/ಬಿ16/21723/2021-22 (Vol-A)** ದಿನಾಂಕ : **03.08.2022**

## ಪ್ರಕಟಣೆ

ನಿಗಮದ ಉದ್ಯೋಗ ಪ್ರಕಟಣೆ ಸಂಖ್ಯೆ ಕವಿಪ್ರನಿನಿ/ಬಿ16/21723/2021-22 ದಿನಾಂಕ 01.02.2022 ರ ಅನ್ವಯ ಸಹಾಯಕ ಇಂಜಿನಿಯರ್ (ವಿದ್ಯುತ್/ಸಿವಿಲ್), ಕಿರಿಯ ಇಂಜಿನಿಯರ್ (ವಿದ್ಯುತ್/ಸಿವಿಲ್) ಮತ್ತು ಕಿರಿಯ ಸಹಾಯಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು, ತಮ್ಮ ಅರ್ಜಿಗಳಲ್ಲಿ ನೀಡಿರುವ ಮಾಹಿತಿಯ ಅನ್ವಯ, ಕನ್ನಡ ಭಾಷಾ ಜ್ಞಾನ ಹೊಂದದೇ ಇದ್ದಲ್ಲಿ, ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡದಿದ್ದಲ್ಲಿ ಅಥವಾ ಎಸ್.ಎಸ್.ಎಲ್.ಸಿ. ಅಥವಾ ಹೆಚ್ಚಿನ ತರಗತಿಗಳಲ್ಲಿ ಕನ್ನಡ ಭಾಷೆಯನ್ನು ಒಂದನೇ ಅಥವಾ ಎರಡನೇ ಭಾಷೆಯಾಗಿ ವ್ಯಾಸಂಗ ಮಾಡದಿದ್ದಲ್ಲಿ ಅಂತಹವರು, ಕನ್ನಡ ಭಾಷಾ ಪರೀಕ್ಷೆಯನ್ನು ಕಡ್ಡಾಯವಾಗಿ ಬರೆಯಬೇಕಿರುತ್ತದೆ.

ದಿನಾಂಕ 07.08.2022 ರಂದು ಮಧ್ಯಾಹ್ನ 02:00 ರಿಂದ ಸಂಜೆ 05:00 ಗಂಟೆಯವರಗೆ ಸಹಾಯಕ ಇಂಜಿನಿಯರ್ (ವಿದ್ಯುತ್/ಸಿವಿಲ್), ಕಿರಿಯ ಇಂಜಿನಿಯರ್ (ವಿದ್ಯುತ್/ಸಿವಿಲ್) ಮತ್ತು ಕಿರಿಯ ಸಹಾಯಕ ಹುದ್ದೆಗಳಿಗೆ, ರಾಜ್ಯಾದ್ಯಂತ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಕನ್ನಡ ಭಾಷಾ ಪರೀಕ್ಷೆಯನ್ನು ನಡೆಸಲಾಗುತ್ತಿದೆ. ಕನ್ನಡ ಭಾಷಾ ಪರೀಕ್ಷೆಯನ್ನು ಬರೆಯಬೇಕಿರುವ ಹಲವಾರು ಅಭ್ಯರ್ಥಿಗಳು ಇನ್ನೂ ಕವಿಪ್ರನಿನಿ/ಕ.ಪ.ಪ್ರಾ. ವೆಬ್-ಸೈಟ್ ನಿಂದ ಪ್ರವೇಶ ಪತ್ರಗಳನ್ನು ಡೌನ್-ಲೋಡ್ ಮಾಡಿಕೊಳ್ಳದಿರುವ ಅಂಶವು ಕವಿಪ್ರನಿನಿಯ ಗಮನಕ್ಕೆ ಬಂದಿರುತ್ತದೆ.

ಆದುದರಿಂದ, ಕನ್ನಡ ಭಾಷಾ ಪರೀಕ್ಷೆಯನ್ನು ಬರೆಯಬೇಕಿರುವಂತಹ ಅಭ್ಯರ್ಥಿಗಳು ವೆಬ್-ಸೈಟ್ ನಿಂದ ಪ್ರವೇಶ ಪತ್ರಗಳನ್ನು ಡೌನ್-ಲೋಡ್ ಮಾಡಿಕೊಂಡು, ನಿಗಧಿತ ಪರೀಕ್ಷಾ ಕೇಂದ್ರಗಳಲ್ಲಿ ಕನ್ನಡ ಭಾಷಾ ಪರೀಕ್ಷೆಗೆ ಹಾಜರಾಗುವಂತೆ ಮತ್ತೊಮ್ಮೆ ತಿಳಿಸಲಾಗಿದೆ. ಕನ್ನಡ ಭಾಷಾ ಪರೀಕ್ಷೆಯನ್ನು ಬರೆಯಬೇಕಿರುವಂತಹ ಅಭ್ಯರ್ಥಿಗಳು, ಸದರಿ ಪರೀಕ್ಷೆಗೆ ಯಾವುದೇ ಕಾರಣಗಳಿಂದ ಗೈರುಹಾಜರಾದಲ್ಲಿ, ಅಂತಹ ಅಭ್ಯರ್ಥಿಗಳನ್ನು ನೇಮಕಾತಿಯ ಮುಂದಿನ ಹಂತಕ್ಕೆ ಪರಿಗಣಿಸಲಾಗುವುದಿಲ್ಲ ಎಂಬ ಅಂಶವನ್ನು ಮತ್ತೊಮ್ಮೆ ಅಭ್ಯರ್ಥಿಗಳ ಗಮನಕ್ಕೆ ತರಲಾಗಿದೆ.

ನಿರ್ದೇಶಕರು (ಆಡಳಿತ ಮತ್ತು ಮಾ.ಸಂ.)
ಕವಿಪ್ರನಿನಿ